**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 4325/2025 ಸಿ.ಡಬ್ಲೂ.1 ಪಿ.ಡಬ್ಲೂ.1

| | |
|---|---|
| ಹೆಸರು | ಅಂಕುಶ |
| ತಂದೆ/ಗಂಡ | ಸೈಬಣ್ಣಾ |
| ವಯಸ್ಸು | 35 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸಸ್ಥಳ | ಆಲೂರು |

ದಿನಾಂಕ 07-03-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ಆರೋಪಿತರ ಪರಿಚಯ ಇರುತ್ತದೆ. ಚಾಸಾ 2 ರಿಂದ 12 ರವರ ಪರಿಚಯ ಇರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನನಗೆ ಆರೋಪಿತರು ಹೊಡೆ ಬಡೆ ಮಾಡಿರುವುದಿಲ್ಲ. ಜೀವ ಬೆದರಿಕೆ ಹಾಕಿರುವುದಿಲ್ಲ. ಅವಾಚ್ಯವಾಗಿ ಬೈದಿರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಸ್ಥಳವನ್ನು ತೋರಿಸಿರುವುದಿಲ್ಲ. ಪೋಲಿಸರು ಒಂದು ದಾಖಲೆಯ ಸಹಿ ಮಾಡು ಅಂತಾ ಹೇಳಿದ ಕಾರಣ ಸಹಿ ಮಾಡಿರುತ್ತೇನೆ. ಸಾಕ್ಷಿಯು ದೂರಿನ ಮೇಲೆ ಇರುವ ಸಹಿಯನ್ನು ನೋಡಿ ಗುರುತಿಸಿದ ಕಾರಣ ದೂರನ್ನು ಅದನ್ನು ನಿಪಿ-1, ಸಾಕ್ಷಿಯ ಸಹಿಯನ್ನು ನಿಪಿ. 1 ಎ ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು. )**

ಪಾಟೀ ಸವಾಲುಃ ಮಾನ್ಯ ಸ ಸ ಅ ವಕೀಲರಿಂದ:

ಸಾಕ್ಷಿಗೆ ದಿಃ 14-02-2025 ರಂದು ಬೆ. 11.05 ರಿಂದ 12.00 ಗಂಟೆವರೆಗೆ ನಾನು ತೋರಿಸಿದ ಸ್ಥಳದಲ್ಲಿ ಪೋಲಿಸರು ಚಾಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಇರುವ ಮಾಹಿತಿ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರಃ ವಕೀಲರಿಂದ:

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇರುವುದಿಲ್ಲಾಃ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ